All India Radio: Bangalore
National Bulletin In Kannada
28.04.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
<><><><>

ಮುಖ್ಯಾಂಶಗಳು

1. ಸಿಕ್ಕಿಂ ನಲ್ಲಿ ನಾಲ್ಕು ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಚಾಲನೆ
2. ಕಿರ್ಗಿಸ್ತಾನದಲ್ಲಿ ಇಂದು ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆಯ ರಕ್ಷಣಾ ಸಚಿವರ ಸಭೆಯಲ್ಲಿ ಸಚಿವ ರಾಜನಾಥ್ ಸಿಂಗ್ ಭಾಗಿ
3. ಏಕರೂಪ ನಾಗರಿಕ ಸಂಹಿತೆ: ಮಧ್ಯಪ್ರದೇಶ ಸರ್ಕಾರದಿಂದ ಉನ್ನತ ಮಟ್ಟದ ಸಮಿತಿ ರಚನೆ
4. ಐಪಿಎಲ್ ಟಿ-೨೦ ಕ್ರಿಕೆಟ್: ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಅಮೋಘ ಜಯ

<><><><>

ಗ್ಯಾಂಗ್ಟಾಕ್‌ನ ಪಲ್ಜೋರ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಸಿಕ್ಕಿಂನ ೫೦ನೇ ರಾಜ್ಯೋತ್ಸವದ ಸಮಾರೋಪ ಸಮಾರಂಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ಸಿಕ್ಕಿಂ ರಾಜ್ಯಪಾಲ ಓಂ ಪ್ರಕಾಶ್ ಮಾಥುರ್, ಮುಖ್ಯಮಂತ್ರಿ ಪ್ರೇಮ್ ಸಿಂಗ್ ತಮಾಂಗ್ ಗೋಲೆ, ಸಿಕ್ಕಿಂ ಸಚಿವರು, ಹಲವಾರು ಸಂಸದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಪ್ರಧಾನಿ ಅವರು ರಾಜ್ಯಾದ್ಯಂತ ನಾಲ್ಕು ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ವೆಚ್ಚದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಯೋಜನೆಗಳು ಮೂಲಸೌಕರ್ಯ, ಸಂಪರ್ಕ, ಆರೋಗ್ಯ ರಕ್ಷಣೆ, ಶಿಕ್ಷಣ, ವಿದ್ಯುತ್, ನಗರಾಭಿವೃದ್ಧಿ, ಪರಿಸರ, ಪ್ರವಾಸೋದ್ಯಮ ಮತ್ತು ಕೃಷಿ ಸೇರಿದಂತೆ ವ್ಯಾಪಕ ಶ್ರೇಣಿಯ ಕ್ಷೇತ್ರಗಳನ್ನು ಒಳಗೊಂಡಿದೆ. ಇವು ಸಿಕ್ಕಿಂನಲ್ಲಿ ಸಮಗ್ರ ಅಭಿವೃದ್ಧಿಯನ್ನು ವೇಗಗೊಳಿಸುವ ಗುರಿಯನ್ನು ಹೊಂದಿವೆ. ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಪ್ರಧಾನಿ ಮಾತನಾಡಲಿದ್ದಾರೆ. ಇದೇ ವೇಳೆ

ಒಂದು ಸಾವಿರದ ೫೦೦ ಕ್ಕೂ ಹೆಚ್ಚು ಸ್ಥಳೀಯ ಕಲಾವಿದರು ಸಾಂಸ್ಕೃತಿಕ ಕಾರ್ಯಕ್ರಮವನ್ನು ಪ್ರಸ್ತುತಪಡಿಸಲಿದೆ.

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ವಾರಾಣಸಿಗೆ ಭೇಟಿ ನೀಡಲಿದ್ದು, ಈ ಸಂದರ್ಭದಲ್ಲಿ ಸುಮಾರು ೬ ಸಾವಿರದ ೩೦೦ ಕೋಟಿ ಮೌಲ್ಯದ ೧೬೩ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಗಂಗಾ ನದಿಗೆ ಅಡ್ಡಲಾಗಿ ನಿರ್ಮಾಣವಾಗಲಿರುವ ಅತ್ಯಾಧುನಿಕ 'ಸಿಗ್ನೇಚರ್ ಸೇತುವೆ' ಈ ಭೇಟಿಯ ಪ್ರಮುಖ ಆಕರ್ಷಣೆಯಾಗಿದ್ದು, ಇದು ನಗರದ ಸಂಚಾರ ದಟ್ಟಣೆಯನ್ನು ಗಣನೀಯವಾಗಿ ಕಡಿಮೆ ಮಾಡಲಿದೆ. ಜೊತೆಗೆ, ವಾರಾಣಸಿ-ಪುಣೆ ಮತ್ತು ಅಯೋಧ್ಯೆ-ಮುಂಬೈ ಮಾರ್ಗದ ಎರಡು ಹೊಸ 'ಅಮೃತ್ ಭಾರತ್ ಎಕ್ಸ್‌ಪ್ರೆಸ್' ರೈಲುಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಪ್ರವಾಸದ ಭಾಗವಾಗಿ ಬಿಎಲ್‌ಡಬ್ಲ್ಯೂ ಮೈದಾನದಲ್ಲಿ ಆಯೋಜಿಸಿರುವ 'ನಾರಿ ಶಕ್ತಿ ವಂದನ್' ಸಮಾವೇಶದಲ್ಲಿ ಸುಮಾರು ೫೦ ಸಾವಿರಕ್ಕೂ ಹೆಚ್ಚು ಮಹಿಳೆಯರನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಲಿದ್ದಾರೆ. ಈ ವೇಳೆ ಕಾಶಿ ವಿಶ್ವನಾಥ ದೇಗುಲಕ್ಕೆ ನಾಳೆ ಭೇಟಿ ನೀಡಲಿರುವ ಪ್ರಧಾನಿ, ಸುಮಾರು ೧೨ ಕಿಲೋಮೀಟರ್ ಉದ್ದದ ರೋಡ್ ಶೋ ನಡೆಸುವ ಸಾಧ್ಯತೆಯಿದೆ. ಈ ಮೂಲಕ ಕಾಶಿಯ ಸಮಗ್ರ ಅಭಿವೃದ್ಧಿ ಮತ್ತು ಜನಸಂಪರ್ಕಕ್ಕೆ ಮತ್ತಷ್ಟು ಬಲ ತುಂಬಲಿದ್ದಾರೆ.

<><><><>

ಪಶ್ಚಿಮ ಬಂಗಾಳ ವಿಧಾನಸಭೆಯ ಎರಡನೇ ಹಾಗೂ ಅಂತಿಮ ಹಂತದ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ನಿನ್ನೆ ತೆರೆ ಬಿದ್ದಿದೆ. ಇಂದು ಅಭ್ಯರ್ಥಿಗಳು ಮತ್ತು ನಾಯಕರು  ಮನೆ ಮನೆಗೆ ತೆರಳಿ ಪ್ರಚಾರ ನಡೆಸಲಿದ್ದಾರೆ. ನಾಳೆ ಏಳು ಜಿಲ್ಲೆಗಳ ಒಟ್ಟು ೧೪೨ ಕ್ಷೇತ್ರಗಳಿಗೆ ಮತದಾನ ನಡೆಯಲಿದೆ. ಬಿಜೆಪಿ ಹಿರಿಯ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರು ಉತ್ತರ ೨೪ ಪರಗಣ ಜಿಲ್ಲೆಯ ಕಂಕಿನಾರಾದಲ್ಲಿ ನಿನ್ನೆ ಬೃಹತ್ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದರು. ಇದೇ ವೇಳೆ ಕೇಂದ್ರ ಸಚಿವ ಅಮಿತ್ ಶಾ ಅವರು ಹೂಗ್ಲಿ ಜಿಲ್ಲೆಯ ಚಂದನನಗರದಲ್ಲಿ ರೋಡ್ ಶೋ ನಡೆಸುವ ಮೂಲಕ ಪಕ್ಷದ ಅಭ್ಯರ್ಥಿಗಳ ಪರ ಮತಯಾಚಿಸಿದರು. ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಮತ್ತು ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಸೇರಿದಂತೆ ಬಿಜೆಪಿಯ ಇತರ ಪ್ರಮುಖ ನಾಯಕರು ರಾಜ್ಯದ ವಿವಿಧೆಡೆ ರ್‍ಯಾಲಿ ಹಾಗೂ ರೋಡ್ ಶೋಗಳಲ್ಲಿ

ಪಾಲ್ಗೊಂಡು ಮತದಾರರ ಗಮನ ಸೆಳೆದರು. ಮತ್ತೊಂದೆಡೆ, ತೃಣಮೂಲ ಕಾಂಗ್ರೆಸ್ ನಾಯಕಿ ಹಾಗೂ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ, ಕೋಲ್ಕತ್ತಾದಲ್ಲಿ ಬೃಹತ್ ರೋಡ್ ಶೋ ನಡೆಸಿದರು. ಪಕ್ಷದ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ, ಹೂಗ್ಲಿಯ ಆರಾಂಬಾಗ್‌ನಲ್ಲಿ ಸಾರ್ವಜನಿಕ ಸಭೆ ಹಾಗೂ ಮಹೇಶ್ವಲಾದಲ್ಲಿ ನಡೆದ ರೋಡ್ ಶೋನಲ್ಲಿ ಪಾಲ್ಗೊಂಡರು.

<><><><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಇಂದು ಕಿರ್ಗಿಸ್ತಾನದ ಬಿಷ್ಕೆಕ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ-ಎಸ್‌ಸಿಒ ರಕ್ಷಣಾ ಸಚಿವರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ವಿಶ್ವಾದ್ಯಂತ ಭದ್ರತಾ ಸವಾಲುಗಳು ಎದುರಾಗಿರುವ ಈ ಸಂದರ್ಭದಲ್ಲಿ ಜಾಗತಿಕ ಶಾಂತಿಯ ಬಗ್ಗೆ ಭಾರತಕ್ಕಿರುವ ಬದ್ಧತೆಯನ್ನು ಸಭೆಯಲ್ಲಿ ಒತ್ತಿ ಹೇಳಲಾಗುವುದು. ಭಯೋತ್ಪಾದನೆ ಮತ್ತು ಉಗ್ರವಾದದ ವಿರುದ್ಧ ಭಾರತ ಹೊಂದಿರುವ ಶೂನ್ಯ ಸಹಿಷ್ಣುತೆ ನಿಲುವನ್ನು ಸಭೆಯಲ್ಲಿ ಸ್ಪಷ್ಟಪಡಿಸಲಾಗುವುದು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ಎಸ್‌ಸಿಒ ಸದಸ್ಯ ರಾಷ್ಟ್ರಗಳ ಇತರ ರಕ್ಷಣಾ ಸಚಿವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲು ಮತ್ತು ಅಲ್ಲಿನ ಭಾರತೀಯ ಸಮುದಾಯವನ್ನು ಭೇಟಿ ಮಾಡಲು ಉತ್ಸುಕನಾಗಿದ್ದೇನೆ ಎಂದು ಇದೇ ವೇಳೆ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ.

<><><><>

ಮಧ್ಯಪ್ರದೇಶ ಸರ್ಕಾರ, ರಾಜ್ಯದಲ್ಲಿ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತರುವ ಕಾರ್ಯಸಾಧ್ಯತೆಯನ್ನು ಪರಿಶೀಲಿಸಲು ಉನ್ನತ ಮಟ್ಟದ ಸಮಿತಿಯನ್ನು ರಚಿಸಿದೆ. ಈ ಸಂಬಂಧ ನಿನ್ನೆ ಆದೇಶ ಹೊರಡಿಸಲಾಗಿದೆ. ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ರಂಜನಾ ಪ್ರಸಾದ್ ದೇಸಾಯಿ ಅವರು ಸಮಿತಿಯ ಅಧ್ಯಕ್ಷತೆ ವಹಿಸಲಿದ್ದಾರೆ. ಮಧ್ಯಪ್ರದೇಶದ ಸಾಮಾಜಿಕ, ಸಾಂಸ್ಕೃತಿಕ ಮತ್ತು ಆರ್ಥಿಕ ವಾಸ್ತವಗಳನ್ನು ಗಣನೆಗೆ ತೆಗೆದುಕೊಂಡು, ಉತ್ತರಾಖಂಡ ಮತ್ತು ಗುಜರಾತ್‌ನಂತಹ ರಾಜ್ಯಗಳು ಅಳವಡಿಸಿಕೊಂಡ ಮಾದರಿಗಳನ್ನು ಸಮಿತಿಯು ಪರಿಶೀಲಿಸಲಿದೆ. ಕರಡು ಮಸೂದೆಯೊಂದಿಗೆ ತನ್ನ ವರದಿಯನ್ನು ೬೦ ದಿನಗಳಲ್ಲಿ ಸಲ್ಲಿಸಲು ಸಮಿತಿಗೆ ಸೂಚಿಸಲಾಗಿದೆ.

<><><><>

ಬೇಸಿಗೆಯ ತಿಂಗಳಲ್ಲಿ ನಿರೀಕ್ಷಿತ ಬಿಸಿಲಿನ ತಾಪ ಹೆಚ್ಚಳದ ಪರಿಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ಸಿದ್ಧತೆಯನ್ನು ಬಲಪಡಿಸುವಂತೆ ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ, ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಒತ್ತಾಯಿಸಿದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳಿಗೆ ಬರೆದ ಪತ್ರದಲ್ಲಿ, ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಕಾರ್ಯದರ್ಶಿ ಪುಣ್ಯ ಸಲಿಲಾ ಶ್ರೀವಾಸ್ತವ ಅವರು, ಈ ವರ್ಷ ಏಪ್ರಿಲ್ ನಿಂದ ಜೂನ್ ವರೆಗೆ ಪೂರ್ವ, ಮಧ್ಯ ಮತ್ತು ವಾಯುವ್ಯ ಭಾರತದ ಕೆಲವು ಭಾಗಗಳಲ್ಲಿ ಹಾಗೂ ಆಗ್ನೇಯ ಪರ್ಯಾಯ ದ್ವೀಪದಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ಬಿಸಿಲಿನ ತಾಪ ಇರುವ ಸಾಧ್ಯತೆಯಿದೆ ಎಂದು ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಗಳ ಆಧಾರದ ಮೇಲೆ ತಿಳಿಸಿದ್ದಾರೆ. ಎಲ್ಲಾ ಆರೋಗ್ಯ ಸೌಲಭ್ಯಗಳಲ್ಲಿ ಮೀಸಲಾದ ನಿರ್ವಹಣಾ ಘಟಕಗಳನ್ನು ಕಾರ್ಯಗತಗೊಳಿಸಲು, ಆಂಬ್ಯುಲೆನ್ಸ್ ಸೇವೆಗಳ ಸನ್ನದ್ಧತೆಯನ್ನು ಖಚಿತಪಡಿಸಿಕೊಳ್ಳಲು ಮತ್ತು ಮುಂಚಿನ ಎಚ್ಚರಿಕೆಗಳನ್ನು ಪ್ರಸಾರ ಮಾಡಲು ಸಚಿವಾಲಯವು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ನಿರ್ದೇಶನ ನೀಡಿದೆ.

<><><>

ಈಶಾನ್ಯ ಅಫ್ಘಾನಿಸ್ತಾನದ ಒಂದು ವಿಶ್ವವಿದ್ಯಾಲಯ ಮತ್ತು ನಾಗರಿಕರ ಮನೆಗಳ ಮೇಲೆ ಪಾಕಿಸ್ತಾನ ನಿನ್ನೆ ಕ್ಷಿಪಣಿಗಳು ದಾಳಿ ನಡೆಸಿದ್ದು, ದಾಳಿಯಲ್ಲಿ ಏಳು ಜನರು ಸಾವನ್ನಪ್ಪಿದ್ದು, ೮೫ ಜನರು ಗಾಯಗೊಂಡಿದ್ದಾರೆ. ಮಾರ್ಟರ್ ಮತ್ತು ಕ್ಷಿಪಣಿ ದಾಳಿಯಿಂದ ಕುನಾರ್ ಪ್ರಾಂತ್ಯದ ರಾಜಧಾನಿ ಅಸಾದಾಬಾದ್ ನಗರ ಮತ್ತು ಪ್ರಾಂತ್ಯದ ಮತ್ತೊಂದು ಜಿಲ್ಲೆಯ ವಿವಿಧ ಪ್ರದೇಶಗಳಿಗೆ ಹಾನಿಯಾಗಿದೆ ಎಂದು ಅಫ್ಘಾನಿಸ್ತಾನ ಸರ್ಕಾರದ ವಕ್ತಾರರು ತಿಳಿಸಿದ್ದಾರೆ. ಈ ತಿಂಗಳ ಆರಂಭದಲ್ಲಿ ಚೀನಾದ ಮಧ್ಯಸ್ಥಿಕೆಯಲ್ಲಿ ಎರಡೂ ಕಡೆಯ ನಡುವೆ ಶಾಂತಿ ಮಾತುಕತೆ ನಡೆದ ನಂತರ ನಡೆದ ಮೊದಲ ದಾಳಿ ಇದಾಗಿದೆ.

<><><>

ದೆಹಲಿಯ ಅರುಣ್ ಜೇಟ್ಲಿ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ರಾಯಲ್ ಚಾಲೆಂಜರ್ಸ್ ಬೆಂಗಳೂರು ೯ ವಿಕೆಟ್‌ಗಳಿಂದ ಅಮೋಘ ಜಯ ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಡೆಲ್ಲಿ ಕ್ಯಾಪಿಟಲ್ಸ್ ೧೬.೩ ಓವರ್‌ಗಳಲ್ಲಿ ಕೇವಲ ೭೫ ರನ್‌ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಆರ್‌ಸಿಬಿ ಪರ

ಜೋಶ್ ಹೇಸಲ್‌ವುಡ್ ೪ ವಿಕೆಟ್ ಮತ್ತು ಭುವನೇಶ್ವರ್ ಕುಮಾರ್ ೩ ವಿಕೆಟ್‌ಗಳನ್ನು ಕಬಳಿಸಿದರು. ಗೆಲುವಿನ ಗುರಿಯನ್ನು ಬೆನ್ನತ್ತಿದ ರಾಯಲ್ ಚಾಲೆಂಜರ್ಸ್ ಬೆಂಗಳೂರು ಕೇವಲ ೯.೩ ಓವರ್‌ಗಳಲ್ಲಿ ೧ ವಿಕೆಟ್ ನಷ್ಟಕ್ಕೆ ೭೭ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು. ಜೋಶ್ ಹೇಸಲ್‌ವುಡ್ ಪಂದ್ಯ ಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ನ್ಯೂ ಚಂಡೀಗಢದ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯುವ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಸೂಪರ್ ಕಿಂಗ್ಸ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ.

<><><>

ಲಂಡನ್‌ನಲ್ಲಿ ಇಂದಿನಿಂದ ಆರಂಭವಾಗಲಿರುವ ಐಟಿಟಿಎಫ್ ವಿಶ್ವ ತಂಡ ಟೇಬಲ್ ಟೆನಿಸ್ ಚಾಂಪಿಯನ್‌ಶಿಪ್-೨೦೧೯ರಲ್ಲಿ ಭಾರತದ ಮನಿಕಾ ಬಾತ್ರಾ ಮತ್ತು ಸತಿಯನ್ ಜ್ಞಾನಶೇಖರನ್ ನೇತೃತ್ವದ ೧೦ ಸದಸ್ಯರ ಭಾರತೀಯ ತಂಡ ಕಣಕ್ಕಿಳಿಯಲಿದೆ. ಪುರುಷರ ಮತ್ತು ಮಹಿಳೆಯರ ವಿಭಾಗದಲ್ಲಿ ಪ್ರತ್ಯೇಕವಾಗಿ ನಡೆಯಲಿರುವ ಈ ಪಂದ್ಯಾವಳಿಯಲ್ಲಿ ಪ್ರತಿ ಗುಂಪು ಸ್ಪರ್ಧೆ ಗರಿಷ್ಠ ಐದು ಸಿಂಗಲ್ಸ್ ಪಂದ್ಯಗಳನ್ನು ಒಳಗೊಂಡಿರಲಿದ್ದು, ಮೂರು ಪಂದ್ಯಗಳಲ್ಲಿ ಜಯ ಸಾಧಿಸುವ ತಂಡವು ಮುಂದಿನ ಹಂತಕ್ಕೆ ಅರ್ಹತೆ ಪಡೆಯಲಿದೆ. ಒಟ್ಟು ೯೪ ತಂಡಗಳು ಈ ಪ್ರತಿಷ್ಠಿತ ಕೂಟದಲ್ಲಿ ಭಾಗವಹಿಸುತ್ತಿದ್ದು, ಪ್ರಾಥಮಿಕ ಹಂತದ ನಂತರ ನಾಕೌಟ್ ಪಂದ್ಯಗಳು ನಡೆಯಲಿವೆ. ಭಾರತದ ಪುರುಷರ ತಂಡವನ್ನು ವಿಶ್ವದ ೩೮ನೇ ಶ್ರೇಯಾಂಕದ ಆಟಗಾರ ಮಾನವ್ ಠಕ್ಕರ್ ಮುನ್ನಡೆಸುತ್ತಿದ್ದು, ಭಾರತವು ಗುಂಪು ೭ರಲ್ಲಿ ಸ್ಲೋವಾಕಿಯಾ, ಟ್ಯುನೀಶಿಯಾ ಮತ್ತು ಗ್ವಾಟೆಮಾಲಾದೊಂದಿಗೆ ಸ್ಥಾನ ಪಡೆದಿದೆ. ಮಹಿಳಾ ತಂಡದ ಸಾರಥ್ಯವನ್ನು ವಿಶ್ವದ ೪೬ನೇ ಶ್ರೇಯಾಂಕದ ಮನಿಕಾ ಬಾತ್ರಾ ವಹಿಸಿದ್ದು, ಗುಂಪು ೯ರಲ್ಲಿ ಉಕ್ರೇನ್, ಉಗಾಂಡಾ ಮತ್ತು ರುವಾಂಡಾ ವಿರುದ್ಧ ಸೆಣಸಲಿದೆ. ಭಾರತೀಯ ತಂಡದಲ್ಲಿ ಪುರುಷರ ವಿಭಾಗದಲ್ಲಿ ಮಾನವ್ ಠಕ್ಕರ್, ಮಾನುಷ್ ಶಾ, ಜಿ. ಸತಿಯನ್, ಹರ್ಮೀತ್ ದೇಸಾಯಿ ಮತ್ತು ಪಯಾಸ್ ಜೈನ್ ಇದ್ದಾರೆ. ಮಹಿಳಾ ತಂಡದಲ್ಲಿ ಮನಿಕಾ ಬಾತ್ರಾ ಜೊತೆಗೆ ಯಶಸ್ವಿನಿ ಘೋರ್ಪಡೆ, ದಿಯಾ ಚಿತಳೆ, ಸುತೀರ್ಥ ಮುಖರ್ಜಿ ಮತ್ತು ಸೈಂದ್ರೆಲಾ ದಾಸ್ ಸ್ಥಾನ ಪಡೆದಿದ್ದಾರೆ.

<><><>

ಪಶ್ಚಿಮ ಏಷ್ಯಾದಲ್ಲಿನ ಪ್ರಸ್ತುತ ಬೆಳವಣಿಗೆಗಳ ನಡುವೆಯೂ ದೇಶದಲ್ಲಿ ರಸಗೊಬ್ಬರ ಮತ್ತು ಇಂಧನ ಪೂರೈಕೆ ಸ್ಥಿರವಾಗಿದ್ದು, ಯಾವುದೇ ಕೊರತೆಯಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಪಶ್ಚಿಮ ಏಷ್ಯಾ ಪರಿಸ್ಥಿತಿ ಕುರಿತು ನಡೆದ ಅಂತರ್ ಸಚಿವಾಲಯ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ರಸಗೊಬ್ಬರ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಅಪರ್ಣಾ ಶರ್ಮಾ, ದೇಶದಲ್ಲಿ ರಸಗೊಬ್ಬರ ಲಭ್ಯತೆ ಬೇಡಿಕೆಗಿಂತ ಅಧಿಕವಾಗಿದೆ. ಸದ್ಯ ೧೮.೧೭ ಲಕ್ಷ ಮೆಟ್ರಿಕ್ ಟನ್ ಯೂರಿಯಾ ಅಗತ್ಯವಿದ್ದು, ೭೧. ೫೮ ಲಕ್ಷ ಮೆಟ್ರಿಕ್ ಟನ್ ದಾಸ್ತಾನು ಲಭ್ಯವಿದೆ ಎಂದು ಮಾಹಿತಿ ನೀಡಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>